ಹೊಸ ಇಂಜಿನಿಯರಿಂಗ್ ಕಾಲೇಜುಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 79 (450)
ಸದಸ್ಯರ ಹೆಸರು : ಶ್ರೀ ಖಾದರ್.ಯು.ಟಿ (ಮಂಗಳೂರು)
ಉತ್ತರಿಸುವ ಸಚಿವರು : ಡಾ. ವಿ.ಎಸ್.ಆಚಾರ್ಯ (ಉನ್ನತ ಶಿಕ್ಷಣ ಸಚಿವರು)

ಪ್ರಶ್ನೆಗಳು:

ಅ) ಈ ವರ್ಷ ಹೊಸದಾಗಿ ಇಂಜಿನಿಯರಿಂಗ್ ಕಾಲೇಜುಗಳನ್ನು ಸ್ಥಾಪಿಸಲಾಗುವುದೇ;

ಆ) ಹಾಗಿದ್ದಲ್ಲಿ, ಸರ್ಕಾರಿ ಕಾಲೇಜುಗಳೆಷ್ಟು; ಖಾಸಗಿ ಕಾಲೇಜುಗಳೆಷ್ಟು? (ಜಿಲ್ಲಾವಾರು ವಿವರ ನೀಡುವುದು);

ಉತ್ತರಗಳು:

ಅ) ಶೈಕ್ಷಣಿಕ ವರ್ಷ 2012–13ಕ್ಕೆ ಸಂಬಂಧಿಸಿದಂತೆ ಹೊಸದಾಗಿ ಇಂಜಿನಿಯರಿಂಗ್ ಕಾಲೇಜುಗಳನ್ನು ಸ್ಥಾಪಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಸಂಯೋಜನೆ ನೀಡುವ ಪ್ರಕ್ರಿಯೆ ಇನ್ನೂ ಪೂರ್ಣಗೊಂಡಿರುವುದಿಲ್ಲ. ಆದಕಾರಣ (ಆ)ನಲ್ಲಿ ಕೇಳಿರುವ ಪ್ರಶ್ನೆಗೆ ಸದ್ಯಕ್ಕೆ ಮಾಹಿತಿ ನೀಡಲು ಸಾಧ್ಯವಾಗುವುದಿಲ್ಲ.

ಶಿಕ್ಷಕರ ನೇಮಕಾತಿ ಮತ್ತು ಇತರ ಸಮಸ್ಯೆಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 81 (423)
ಸದಸ್ಯರ ಹೆಸರು : ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ)
ಉತ್ತರಿಸುವ ಸಚಿವರು : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಪ್ರಶ್ನೆಗಳು:

ಅ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಪೈಕಿ ಎಷ್ಟು ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದೆ

(ವಿವರ ನೀಡುವುದು);

ಆ) ಎಷ್ಟು ಸಮಯದೊಳಗೆ ಸರ್ಕಾರ ಶಿಕ್ಷಕರ ಕೊರತೆಯನ್ನು ನೀಗಿಸುತ್ತದೆ;

ಇ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿನ ಎಲ್ಲಾ ಶಾಲೆಗಳಿಗೂ ಕುಡಿಯುವ ನೀರು ಮತ್ತು ಶೌಚಾಲಯದ ಸೌಲಭ್ಯವನ್ನು ಗಂಡು ಮಕ್ಕಳಿಗೆ ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕವಾಗಿ ನೀಡಲಾಗಿದೆಯೇ? (ವಿವರ ನೀಡುವುದು)

ಉತ್ತರಗಳು:

ಅ) ತೀರ್ಥಹಳ್ಳಿ ಮತಕ್ಷೇತ್ರದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 135 ಹುದ್ದೆಗಳು ಹಾಗೂ ಸರ್ಕಾರಿ ಪ್ರೌಢಶಾಲೆಗಳಲ್ಲಿ 36 ಹುದ್ದೆಗಳು ಖಾಲಿ ಇರುತ್ತದೆ.

ಆ) ಖಾಲಿ ಇರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ಕೋರಿ ಆರ್ಥಿಕ ಇಲಾಖೆಯನ್ನು ಸಂಪರ್ಕಿಸಲಾಗುತ್ತಿದ್ದು, ಅನುಮತಿ ಬಂದ ಕೂಡಲೇ ಶೀಘ್ರದಲ್ಲಿ ಭರ್ತಿ ಮಾಡಲು ಕ್ರಮವಹಿಸಲಾಗುವುದು.

ಇ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 231 ಸರ್ಕಾರಿ ಪ್ರಾಥಮಿಕ ಶಾಲೆಗಳು ಹಾಗೂ 26 ಸರ್ಕಾರಿ ಪ್ರೌಢಶಾಲೆಗಳಿರುತ್ತದೆ.

ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗೆ ಕುಡಿಯುವ ನೀರು ಒದಗಿಸಿದ್ದು ಶೌಚಾಲಯಗಳಿಗೆ ಸಂಬಂಧಿಸಿದಂತೆ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಗಂಡು ಮಕ್ಕಳಿಗೆ ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕವಾಗಿ ಶೌಚಾಲಯವನ್ನು ನೀಡಲಾಗಿದೆ. (ಕಟ್ಟಿಹಕ್ಕಲು ಮತ್ತು ಹೆದ್ದೂರು ಶಾಲೆಗಳಿಗೆ ಒದಗಿಸಲಾಗುತ್ತಿದೆ)